**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ-72 ರಡಿಯಲ್ಲಿ ನೀಡಿರುವ ಸೂಚನೆಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಹೇಳಿಕೆ**

**ವಿಷಯ**

ಪಾಲಿಟೆಕ್ನಿಕ್‌ಗಳ ಉತ್ತರ ಪತ್ರಿಕೆ ಮೌಲ್ಯಮಾಪಕರಿಗೆ ಹಾಗೂ ಪರೀಕ್ಷಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವವರಿಗೆ ದೀರ್ಘಕಾಲದಿಂದ ಮೌಲ್ಯಮಾಪನ ದರ ಹಾಗೂ ಇತರೆ ಭತ್ಯೆಗಳನ್ನು ಪರಿಷ್ಕರಣೆ ಮಾಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಬಗ್ಗೆ.

**ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಹೇಳಿಕೆ**

ಪಾಲಿಟೆಕ್ನಿಕ್‌ಗಳ ಉತ್ತರ ಪತ್ರಿಕೆ ಮೌಲ್ಯಮಾಪಕರಿಗೆ ಹಾಗೂ ಪರೀಕ್ಷಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವವರಿಗೆ ಸರ್ಕಾರದ ಪತ್ರ ಸಂಖ್ಯೆ: ಇಡಿ 132 ಟಿಪಿಇ 2013, ದಿನಾಂಕ:21.02.2014ರನ್ವಯ 2013ನೇ ನವೆಂಬರ್ ಸೆಮಿಸ್ಟರ್ ಪರೀಕ್ಷೆಯಿಂದ ಅನ್ವಯಿಸುವಂತೆ ಸಂಭಾವನೆ ದರಗಳನ್ನು ಪರಿಷ್ಕರಿಸಲಾಗಿರುತ್ತದೆ. ಮುಂದುವರೆದು, ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯಂತೆ ದಿನಾಂಕ:21-02-2014 ರಿಂದ ಮುಂದಿನ 05 ವರ್ಷಗಳವರೆಗೆ ಸಂಭಾವನೆ ದರ ಪರಿಷ್ಕರಣೆಗೆ ಪ್ರಸ್ತಾವನೆಯನ್ನು ಸಲ್ಲಿಸಬಾರದೆಂದು ತಾಂತ್ರಿಕ ಶಿಕ್ಷಣ ನಿರ್ದೇಶಕರಿಗೆ ತಿಳಿಸಲಾಗಿತ್ತು.

ಪ್ರಸ್ತುತ ಪಾಲಿಟೆಕ್ನಿಕ್‌ಗಳ ಉತ್ತರ ಪತ್ರಿಕೆ ಮೌಲ್ಯಮಾಪಕರಿಗೆ ಹಾಗೂ ಪರೀಕ್ಷಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವವರಿಗೆ ಸಂಭಾವನೆ ದರಗಳನ್ನು ಪರಿಷ್ಕರಿಸುವ ಬಗ್ಗೆ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.

ಇಡಿ 046 ಟಿಪಿಇ 2020.

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)